# ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು,
# ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ.

ಸಂ:ಉನಿಚಿ/ಮಮಅಇ/ಅಂ.ಕಾ/ಅಂ.ಸ/2020-21

ಉಪನಿರ್ದೇಶಕರ ಕಛೇರಿ,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ಬಾಲಕರ ಬಾಲಮಂದಿರದ ಆವರಣ,
ಚಿಕ್ಕಮಗಳೂರು.
ದಿನಾಂಕ:31.12.2020.

**ವಿಷಯ:- ಅಂಗನಾಡಿ ಕಾರ್ಯಕರ್ತೆ/ ಸಹಾಯಕಿಯರ ಹುದ್ದೆ ಭರ್ತಿ ಮಾಡಲು ಅರ್ಜಿ ಆಹ್ವಾನಿಸುವ ಬಗ್ಗೆ.**

**ಉಲ್ಲೇಖ:- ಸರ್ಕಾರಿ ಆದೇಶದ ಸಂ:ಮಮಇ/303/ಐಸಿಡಿ/2017 ಬೆಂಗಳೂರು ದಿನಾಂಕ:23.09.2017**

************

ಚಿಕ್ಕಮಗಳೂರು ಜಿಲ್ಲೆಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ 7 ಶಿಶು ಅಭಿವೃದ್ಧಿ ಯೋಜನೆಗಳ ವ್ಯಾಪ್ತಿಯ ಈ ಕೆಳಗೆ ಕಾಣಿಸಲಾದ ಗ್ರಾಮಗಳ ವ್ಯಾಪ್ತಿಯ ಅಂಗನವಾಡಿ ಕೇಂದ್ರಗಳ ಕಾರ್ಯಕರ್ತೆ ಹಾಗೂ ಸಹಾಯಕಿಯಾಗಿ ಗೌರವಸೇವೆ ಸಲ್ಲಿಸಲು ಈ ಕೆಳಗೆ ತೋರಿಸಲಾದ ಮೀಸಲಾತಿ ಹೊಂದಿದ, ಪ್ರಕಟಣೆ ಹೊರಡಿಸಿದ ದಿನಾಂಕದಿಂದ 18 ರಿಂದ 35 ವರ್ಷದೊಳಗಿನ ಹಾಗೂ ವಿಕಲಚೇತನ ಅಭ್ಯರ್ಥಿಗಳಿಗೆ 45 ವರ್ಷದೊಳಗಿನ (ಅರ್ಹ ಸ್ಥಳೀಯ ಅದೇ ಗ್ರಾಮದ ಮಹಿಳಾ ಅಭ್ಯರ್ಥಿಗಳಿಂದ ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ಮಾತ್ರ) ಈ ಕೆಳಗೆ ತೋರಿಸಲಾದ ನಮೂನೆಯಲ್ಲಿ ಅರ್ಜಿ ಅಹ್ವಾನಿಸಲಾಗಿದೆ. ಅಂಗನವಾಡಿ ಕಾರ್ಯಕರ್ತೆಯಾಗಲು ಎಸ್.ಎಸ್.ಎಲ್.ಸಿ ತೇರ್ಗಡೆಯಾಗಿರಬೇಕು. ಅಂಗನವಾಡಿ ಸಹಾಯಕಿಯಾಗಲು ಕನಿಷ್ಠ 4ನೇ ತರಗತಿ ತೇರ್ಗಡೆಯಾಗಿದ್ದು, ಗರಿಷ್ಠ ವಿದ್ಯಾರ್ಹತೆ 9ನೇ ತರಗತಿ ತೇರ್ಗಡೆಯಾಗಿರಬೇಕು. ಈ ಕೆಳಗೆ ತೋರಿಸಲಾದ ಎಲ್ಲಾ ದಾಖಲೆಗಳೊಂದಿಗೆ ಸಂಬಂಧಿತರು ಭರ್ತಿ ಮಾಡಿದ ಅರ್ಜಿಗಳನ್ನು ದಿನಾಂಕ:05.02.2021 ರ ಸಂಜೆ:5.30 ಗಂಟೆಯೊಳಗೆ ಆನ್-ಲೈನ್ ಮೂಲಕ ಅರ್ಜಿ ಸಲ್ಲಿಸಲು ಸೂಚಿಸಿದೆ.

## ಅರ್ಜಿಯೊಂದಿಗೆ ಆನ್-ಲೈನ್‌ನಲ್ಲಿ ಅಳವಡಿಸಬೇಕಾದ ದಾಖಲೆಗಳು

1. ಭರ್ತಿ ಮಾಡಿದ ಅರ್ಜಿ ನಮೂನೆ(ಆನ್‌ಲೈನ್)
2. ಜನನ ಪ್ರಮಾಣ ಪತ್ರ/ಜನ್ಮದಿನಾಂಕ ಇರುವ ಎಸ್.ಎಸ್.ಎಲ್.ಸಿ ಅಂಕಪಟ್ಟಿ/ಅಂಗನವಾಡಿ ಸಹಾಯಕಿಯರಿಗೆ ಶಾಲಾ ವರ್ಗಾವಣೆ ಪ್ರಮಾಣ ಪತ್ರ.
3. ತಹಶೀಲ್ದಾರು/ಉಪತಹಶೀಲ್ದಾರಿಂದ ಪಡೆದ ವಾಸಸ್ಥಳ ದೃಢೀಕರಣ ಪತ್ರ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕಕ್ಕೆ 3 ವರ್ಷ ಮೀರಿರಬಾರದು.
4. ವಿದ್ಯಾರ್ಹತೆ ಬಗ್ಗೆ ಪ್ರಮಾಣ ಪತ್ರ (ಕಾರ್ಯಕರ್ತೆ ಹುದ್ದೆಗೆ 10ನೇ ತರಗತಿಗಿಂತ ಹೆಚ್ಚಿನ ವಿದ್ಯಾರ್ಹತೆ ಹೊಂದಿದ್ದರೂ 10ನೇ ತರಗತಿಯ ಅಂಕಪಟ್ಟಿಯನ್ನು ಲಗತ್ತಿಸುವುದು ಕಡ್ಡಾಯ)
5. ವಿದ್ಯಾರ್ಹತೆ ಬಗ್ಗೆ ಪ್ರಮಾಣ ಪತ್ರ (ಸಹಾಯಕಿ ಹುದ್ದೆಗೆ 4ನೇ ತರಗತಿಯಿಂದ 9ನೇ ತರಗತಿಗಿಂತ ಹೆಚ್ಚಿನ ವಿದ್ಯಾರ್ಹತೆ ಹೊಂದಿದ್ದರೂ 9ನೇ ತರಗತಿಯ ಅಂಕಪಟ್ಟಿಯನ್ನು ಲಗತ್ತಿಸುವುದು ಕಡ್ಡಾಯ)(ಸಹಾಯಕಿ ಹುದ್ದೆಗೆ ಅಂಗವಿಕಲ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ)
6. ಮೀಸಲಾತಿ ಅಭ್ಯರ್ಥಿಗಳ ಜಾತಿ ಪ್ರಮಾಣ ಪತ್ರ.
7. ಪತಿಯ ಮರಣ ಪ್ರಮಾಣ ಪತ್ರ (ವಿಧವಾ ವೇತನದ ದೃಢೀಕರಣವನ್ನು ಪರಿಗಣಿಸುವುದಿಲ್ಲ)
8. ಅತ್ಮಹತ್ಯೆ ಮಾಡಿಕೊಂಡ ರೈತರ ಪತ್ನಿ ಎಂದು ಉಪವಿಭಾಗಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ.

9. ಅಂಗವಿಕಲತೆ ಪ್ರಮಾಣ ಪತ್ರ (ದೈಹಿಕ ಅಂಗವಿಕಲತೆ ಶೇ.60 ಕ್ಕಿಂತ ಕಡಿಮೆ ಇದ್ದಲ್ಲಿ ಮಾತ್ರ) (ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ಅರ್ಜಿ ಸಲ್ಲಿಸುವವರಿಗೆ ಮಾತ್ರ) (ಅಂಗವಿಕಲ ವೇತನದ ದೃಡೀಕರಣವನ್ನು ಪರಿಗಣಿಸುವುದಿಲ್ಲ) ಕಿವುಡರು , ಮೂಕರು, ಕುರುಡರು, ಬುದ್ಧಿಮಾಂದ್ಯರು ಮತ್ತು ಮಾನಸಿಕ ಅಸ್ವಸ್ಥರು ಹುದ್ದೆಗೆ ಅರ್ಹರಲ್ಲ.
10. ವಿಚ್ಛೇದನ ಪ್ರಮಾಣ ಪತ್ರ (ನ್ಯಾಯಾಲಯದಿಂದ ಪಡೆದಿರಬೇಕು)
11. ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ ನಡೆಸಲ್ಪಟ್ಟ ಮಾಜಿ ದೇವದಾಸಿಯರ ಸಮೀಕ್ಷೆಯ ಪಟ್ಟಿಯಲ್ಲಿರುವ ಮಾಜಿ ದೇವದಾಸಿಯರ ಮಕ್ಕಳು ಎಂಬುದರ ಬಗ್ಗೆ ಮಹಿಳಾ ಅಭಿವೃದ್ಧಿ ನಿಗಮದ ಅಧಿಕಾರಿಗಳಿಂದ ಪ್ರಮಾಣ ಪತ್ರ.
12. ಪರಿತ್ಯಕ್ತೆ ಎಂಬ ಬಗ್ಗೆ ಗ್ರಾಮ ಪಂಚಾಯತ್‌ನಿಂದ ಪಡೆದ ಪ್ರಮಾಣ ಪತ್ರ.
13. ಇಲಾಖೆಯ ಸುಧಾರಣಾ ಸಂಸ್ಥೆ/ರಾಜ್ಯ ಮಹಿಳಾ ನಿಲಯಗಳ ನಿವಾಸಿ ಎಂಬ ಬಗ್ಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ(ಇವರಿಗೆ ವಾಸಸ್ಥಳ ದೃಡೀಕರಣ ಕಡ್ಡಾಯವಲ್ಲ).
14. ಯೋಜನಾ ನಿರಾಶ್ರಿತರೆಂಬ ಬಗ್ಗೆ ತಹಶೀಲ್ದಾರರಿಂದ ಪಡೆದ ಪ್ರಮಾಣ ಪತ್ರ.
15. ಸ್ಥಳೀಯ ಸಂಸ್ಥೆಗಳ ಜನಪ್ರತಿನಿಧಿ ಆಗಿದ್ದಲ್ಲಿ, ಕಾರ್ಯಕರ್ತೆ/ಸಹಾಯಕಿ ಹುದ್ದೆಗೆ ಆಯ್ಕೆಯಾದಲ್ಲಿ ಸದಸ್ಯತ್ವಕ್ಕೆ ರಾಜೀನಾಮೆ ನೀಡಬೇಕಿರುತ್ತದೆ.

ಉಪನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ಚಿಕ್ಕಮಗಳೂರು.

**ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು,**
**ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ.**

ಸಂ:ಉನಿಚಿ/ಮಮಅಇ/ಅಂ.ಕಾ/ಅಂ.ಸ/2020-21

ಉಪನಿರ್ದೇಶಕರ ಕಛೇರಿ,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ಬಾಲಕರ ಬಾಲಮಂದಿರದ ಆವರಣ,
ಚಿಕ್ಕಮಗಳೂರು.
ದಿನಾಂಕ:31.12.2020.

ಚಿಕ್ಕಮಗಳೂರು ಜಿಲ್ಲೆಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ 7 ಶಿಶುಅಭಿವೃದ್ಧಿ ಯೋಜನೆಗಳ ವ್ಯಾಪಿಯಲ್ಲಿ ಬರುವ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿಯಿರುವ 13 ಅಂಗನವಾಡಿ ಕಾರ್ಯಕರ್ತೆ ಮತ್ತು 68 ಅಂಗನವಾಡಿ ಸಹಾಯಕಿಯರ ಗೌರವ ಸೇವೆ ಹುದ್ದೆಗಳಿಗೆ ನೇಮಕ ಮಾಡಲು ಅರ್ಹ ಮಹಿಳಾ ಅಭ್ಯರ್ಥಿಗಳಿಂದ ಆನ್-ಲೈನ್ ಮೂಲಕ ಅರ್ಜಿಗಳನ್ನು ಅಹ್ವಾನಿಸಿದೆ. ಈ ಸಂಬಂಧ ಹೆಚ್ಚಿನ ವಿವರಗಳಿಗೆ ಸಂಬಂಧಪಟ್ಟ ಶಿಶುಅಭಿವೃದ್ಧಿ ಯೋಜನಾಧಿಕಾರಿಗಳನ್ನು ಕಛೇರಿಯ ವೇಳೆಯಲ್ಲಿ ಸಂಪರ್ಕಿಸಲು ಕೋರಿದೆ.

| | |
|---|---|
| ಅರ್ಜಿ ಆನ್‌ಲೈನ್‌ನಲ್ಲಿ ಅಳವಡಿಸಲು ನಿಗದಿಪಡಿಸಿದ ಪ್ರಾರಂಭದ ದಿನಾಂಕ | 05.01.2021 |
| ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 05.02.2021 ಸಂಜೆ:5.30 ಗಂಟೆಗೆ |
| ವೆಬ್ ಸೈಟ್ ವಿಳಾಸ | http://anganwadirecruit.kar.nic.in |

ಉಪನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ಚಿಕ್ಕಮಗಳೂರು.